ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧೦**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಶುಕ್ರವಾರ, ದಿನಾಂಕ: ೪ನೇ ಜುಲೈ ೨೦೧೪

---

### ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಅಬಕಾರಿ ಸಚಿವರು
೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು
೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

### ಅನುದಾನಿತ ಶಾಲೆಗಳನ್ನು ಸರ್ಕಾರೀಕರಣಗೊಳಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೬ (೬೮೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಶಾಲಾವಾರು ಪ್ರತ್ಯೇಕ ಹೆಸರುಗಳ ವಿವರ ನೀಡುವುದು)

(ಆ) ಅವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಅನುದಾನಿತ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳಿಗೆ ಸರ್ಕಾರಿ ಶಾಲೆಗಳಂತೆ ಪೂರ್ಣ ಸವಲತ್ತುಗಳನ್ನು ಕೊಡದಿರಲು ಕಾರಣವೇನು ;

(ಈ) ಅನುದಾನಿತ ಶಾಲೆಗಳನ್ನು ಸ್ವಾಧೀನಪಡಿಸಿಕೊಂಡು ಸರ್ಕಾರೀಕರಣಗೊಳಿಸಿದರೆ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಅನುಕೂಲವಲ್ಲವೇ ;

(ಉ) ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಳ್ಳಲಿದೆ ?

## ಅನುದಾನಿತ ಹಾಗೂ ಸರ್ಕಾರಿ ಶಿಕ್ಷಕ, ಉಪನ್ಯಾಸಕರ ಸೇವಾ ಸೌಲಭ್ಯಗಳಲ್ಲಿ ತಾರತಮ್ಯ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೩೭ (೭೪೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳ ಅನುದಾನಿತ ಶಿಕ್ಷಕ, ಉಪನ್ಯಾಸಕರಿಗೂ ಸರ್ಕಾರಿ ಶಿಕ್ಷಕ ಉಪನ್ಯಾಸಕರಿಗೂ ಸೇವಾ ಸೌಲಭ್ಯಗಳ ವಿಷಯದಲ್ಲಿ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ತಾರತಮ್ಯಕ್ಕೆ ಕಾರಣಗಳೇನು ; ಈ ತಾರತಮ್ಯ ಸರಿಪಡಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು ;

(ಆ) ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ೨೦೦೬ರ ನಂತರ ನೇಮಕಗೊಂಡ ಸಿಬ್ಬಂದಿಗೆ ನಿವೃತ್ತಿ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ; ಇಲ್ಲದಿದ್ದರೆ ಕಾರಣವೇನು ; ಈ ಸಮಸ್ಯೆಗೆ ಸರ್ಕಾರ ತೆಗೆದುಕೊಂಡ ಪರಿಹಾರವೇನು ?

(ಇ) ೧೯೮೭ರಿಂದ ೯೫ರವರೆಗೆ ಆರಂಭವಾದ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಈವರೆಗೆ ಎಷ್ಟು ಶಾಲಾ ಕಾಲೇಜುಗಳಿಗೆ ಅನುದಾನ ನೀಡಲಾಗಿದೆ ; ಅನುದಾನಕ್ಕೊಳಪಡಿಸಲು ಬಾಕಿಯಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ;

(ಈ) ೧೯೯೫ರಿಂದ ೨೦೧೪ರವರೆಗೆ ಆರಂಭವಾಗಿರುವ ಶಾಲಾ ಕಾಲೇಜುಗಳಿಗೆ ಅನುದಾನ ನೀಡುವ ಕುರಿತು ಸರ್ಕಾರದ ನಿಲುವೇನು ; ಹಾಗೂ ತೆಗೆದುಕೊಂಡ ಕ್ರಮವೇನು ?

## ಸರ್ಕಾರಿ ಪದವಿ ಪೂರ್ವ ಕಾಲೇಜು ಕಟ್ಟಡ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೮ (೭೪೦) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ ಹಿಪ್ಪರಗಿ ಗ್ರಾಮದಲ್ಲಿ ೨೦೧೧ನೇ ಸಾಲಿನಲ್ಲಿ ಮಂಜೂರಾದ ಪದವಿ ಪೂರ್ವ ಕಾಲೇಜಿಗೆ ಸರ್ಕಾರಿ ನಿವೇಶನ ಮತ್ತು ಹಣಕಾಸಿನ ಮಂಜೂರಾತಿ ಇದ್ದಾಗ್ಯೂ ಕಟ್ಟಡದ ಕಾಮಗಾರಿ ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು ; ಯಾವಾಗ ಪ್ರಾರಂಭಿಸಲಾಗುವುದು ;

(ಆ) ವಿಳಂಬಕ್ಕೆ ಕಾರಣಕರ್ತರಾದವರ ಮೇಲೆ ಯಾವ ಕ್ರಮ ಜರುಗಿಸಲಾಗುವುದು ; ಎಷ್ಟು ನಿರ್ದಿತ ಸಮಯದಲ್ಲಿ ಕಟ್ಟಡ ನಿರ್ಮಿಸಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗುವುದು ?

## ಗ್ರಾಮೀಣಾಭಿವೃದ್ಧಿ ಯೋಜನೆಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೩೯ (೮೦೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ಪ್ರಸಕ್ತ ಸರ್ಕಾರದಲ್ಲಿ ನೂತನವಾಗಿ ಬಂದಿರುವ ಯೋಜನೆಗಳಾವುವು ; ಮುಂದುವರಿದಿರುವ ಹಿಂದಿನ ಯೋಜನೆಗಳಾವುವು ;

(ಆ) ಹಾಗಿದ್ದಲ್ಲಿ, ಯಾವ್ಯಾವ ಯೋಜನೆಗಳಿಗೆ ಎಷ್ಟು ಹಣ ಮೀಸಲಿಡಲಾಗಿದೆ ;

(ಇ) ಹಿಂದಿನ ಸುವರ್ಣಗ್ರಾಮ ಯೋಜನೆ ಮುಂದುವರಿಸಲಾಗುವುದೆ ;

(ಈ) ಗ್ರಾಮೀಣ ಪ್ರದೇಶದ ರಸ್ತೆಗಳಿಗೆ ವಿಶೇಷ ಅನುದಾನ ನೀಡಲು ಸರ್ಕಾರ ಚಿಂತಿಸಿದೆಯೆ ;

(ಉ) ಯಾವ ಯಾವ ತಾಲ್ಲೂಕು ಮತ್ತು ಜಿಲ್ಲೆಗಳಿಗೆ ನೀಡಿರುವ ಹಣವೆಷ್ಟು ? (ವಿವರ ನೀಡುವುದು)

## ವಿಶ್ವವಿದ್ಯಾಲಯಗಳ ಸೆನೆಟ್ ಹಾಗೂ ಸಿಂಡಿಕೇಟ್ ಸದಸ್ಯರು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೦ (೭೭೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾಲಯಗಳು ಎಷ್ಟು ; ಸದರಿ ವಿಶ್ವವಿದ್ಯಾಲಯಗಳ ಸೆನೆಟ್ ಹಾಗೂ ಸಿಂಡಿಕೇಟ್ ಸದಸ್ಯರುಗಳ ಹೆಸರುಗಳೊಂದಿಗೆ ವಿವರ ನೀಡುವುದು ;

(ಆ) ಸದರಿ ವಿಶ್ವವಿದ್ಯಾಲಯಗಳ ಸೆನೆಟ್ ಹಾಗೂ ಸಿಂಡಿಕೇಟ್ ಸದಸ್ಯರ ನೇಮಕ ಮಾಡಲು ಅನುಸರಿಸುತ್ತಿರುವ ಮಾನದಂಡವೇನು ; ಸದರಿ ವಿಶ್ವವಿದ್ಯಾಲಯಗಳ ಸೆನೆಟ್ ಹಾಗೂ ಸಿಂಡಿಕೇಟ್ ಸದಸ್ಯರಲ್ಲಿ ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ?

## ಸರ್ಕಾರಿ ವಿಶ್ವವಿದ್ಯಾಲಯಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೧ (೬೮೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಸರ್ಕಾರಿ ವಿಶ್ವವಿದ್ಯಾಲಯಗಳು ಎಷ್ಟು ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೧–೧೨, ೨೦೧೨–೧೩, ೨೦೧೩–೧೪ ಮತ್ತು ೨೦೧೪–೧೫ ರಲ್ಲಿ ವಿಶ್ವವಿದ್ಯಾಲಯಗಳಿಂದ ಎಷ್ಟು ಜನರಿಗೆ ಡಾಕ್ಟರೇಟ್ ನೀಡಲಾಗಿದೆ ; ಯಾವ ಯಾವ ಮಾನದಂಡದಲ್ಲಿ ನೀಡಲಾಗಿದೆ ; ಗೌರವ ಡಾಕ್ಟರೇಟ್ ನೀಡಲು ಸರ್ಕಾರ ಅಥವಾ ವಿಶ್ವವಿದ್ಯಾಲಯಗಳಿಂದ ಸಮಿತಿಗಳು ಇರುತ್ತವೆಯೇ ; ಇದ್ದರೆ, ಆಯ್ಕೆ ಸಮಿತಿಗೆ ಸದಸ್ಯರಾಗಲು ಮಾನದಂಡವೇನು ; ಸದಸ್ಯರ ಸಂಖ್ಯೆಯ ಮಿತಿ ಏನು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಒಬ್ಬ ವ್ಯಕ್ತಿಗೆ ಎಷ್ಟು ಬಾರಿ ಡಾಕ್ಟರೇಟ್ ನೀಡಬಹುದು ;

(ಈ) ದೇಶದ ಬೇರೆ ವಿಶ್ವವಿದ್ಯಾಲಯಗಳಲ್ಲಿ ಡಾಕ್ಟರೇಟ್ ಪಡೆದಿದ್ದರೂ ರಾಜ್ಯದ ವಿಶ್ವವಿದ್ಯಾಲಯಗಳಿಂದ ಮತ್ತೊಮ್ಮೆ ನೀಡಬಹುದೇ ?

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೨ (೭೫೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅನುಷ್ಠಾನ ಮಾಡಿದ ಯೋಜನೆಗಳೆಷ್ಟು ; (ಯೋಜನೆಗಳವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಆ ಯೋಜನೆಗಳಿಗೆ ಮಾಡಿದ ವೆಚ್ಚವೆಷ್ಟು ; (ಯೋಜನಾವಾರು ವಿವರ ಒದಗಿಸುವುದು)

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನಗಳ ಅಡಿಯಲ್ಲಿ ಹೊಸ ಯೋಜನೆಗಳನ್ನು ಬೀದರ್ ಜಿಲ್ಲೆಗೆ ತರುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

## ಗ್ರಾಮೀಣ ಜನರ ಜೀವನ ಮಟ್ಟ ಸುಧಾರಣೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೩ (೭೯೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮಗಳ ಅಭಿವೃದ್ಧಿ, ಗ್ರಾಮೀಣ ಜನರ ಜೀವನ ಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರ ಹಮ್ಮಿಕೊಂಡಿರುವ ೧೫ ಅಂಶಗಳ ಕಾರ್ಯಕ್ರಮದಲ್ಲಿ ಯಾವ ಯಾವ ಸೌಕರ್ಯ ಒದಗಿಸಲಾಗುತ್ತದೆ ;

(ಆ) ಈ ೧೫ ಅಂಶಗಳ ಕಾರ್ಯಕ್ರಮದಿಂದ ಗ್ರಾಮ ಪಂಚಾಯತ್‌ಗಳಿಗೆ ಯಾವ ರೀತಿ ಆರ್ಥಿಕ ಸಹಾಯವನ್ನು ಒದಗಿಸಲಾಗುತ್ತದೆ ;

(ಇ) ಈ ಕಾರ್ಯಕ್ರಮವನ್ನು ಬಳ್ಳಾರಿ ಜಿಲ್ಲೆಯ ಯಾವ ಯಾವ ಗ್ರಾಮ ಪಂಚಾಯತ್‌ಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; ತಾಲ್ಲೂಕುವಾರು ಗ್ರಾಮ ಪಂಚಾಯತಿಗಳ ವಿವರ ನೀಡುವುದು ?

## ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಶಿಕ್ಷಕರ ಕೊರತೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೪ (೭೩೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ (ಪ್ರಾಥಮಿಕ ಹಾಗೂ ಪ್ರೌಢಶಾಲೆ) ಇಂಗ್ಲಿಷ್ ಶಿಕ್ಷಕರು ಇಲ್ಲದ ಶಾಲೆಗಳು ಎಷ್ಟು ; (ತಾಲ್ಲೂಕುವಾರು ಅಂಕಿ–ಅಂಶ ಒದಗಿಸುವುದು)

(ಆ) ಮಕ್ಕಳಿಗೆ ಇಂಗ್ಲಿಷ್ ಕಲಿಕೆಗೆ ಪೂರಕವಾಗಿ ಸರ್ಕಾರ ಬೇರೆ ಯಾವುದೇ ಯೋಜನೆ/ಕಾರ್ಯಕ್ರಮ ಹಮ್ಮಿಕೊಂಡಿದೆಯೇ ; (ಮಾಹಿತಿ ಒದಗಿಸುವುದು)

(ಇ) ಇಂಗ್ಲಿಷ್ ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಮಾಲ್‌ಗಳು ಕನ್ನಡ ಚಿತ್ರಗಳ ಪ್ರದರ್ಶನ ಕಡೆಗಣಿಸುತ್ತಿರುವುದು

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) –**

೧೪೫ (೯೭) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದ ಮಲ್ಟಿಪ್ಲೆಕ್ಸ್ ಮಾಲ್‌ಗಳು ಕರ್ನಾಟಕದಲ್ಲಿದ್ದರೂ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸುವಲ್ಲಿ ತಾರತಮ್ಯ ತೋರುತ್ತಾ ನಿರ್ಲಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಲೆಕ್ಷನ್ ಬಾರದ ಬೆಳಗಿನ ೧೦.೦೦ ಗಂಟೆ ಸಮಯ, ರಾತ್ರಿ ೯.೩೦ ರ ಸಮಯವನ್ನು ಕನ್ನತ ಚಿತ್ರಗಳ ಪ್ರದರ್ಶನಕ್ಕೆ ಸಮಯ ಹಂಚಿಕೆ ಮಾಡಿ ಕನ್ನಡ ಚಿತ್ರಗಳಿಗೆ ಅನ್ಯಾಯ ಮಾಡುತ್ತಿವೆ, ಅಲ್ಲದೇ ದುಬಾರಿ ಟಿಕೆಟ್ ದರಗಳು ರೂ. ೧೫೦/--, ರೂ. ೨೦೦/– ಹಾಗೂ ರೂ. ೨೫೦/– ನಿಗದಿ ಮಾಡಿ ಕನ್ನಡ ಚಿತ್ರಗಳನ್ನು ಕಡೆಗಣಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಸಮರ್ಪಕ ನಿರ್ವಹಣೆಗೆ ಸರ್ಕಾರದ ನಿಲುವುಗಳೇನು ?

## ಮಕ್ಕಳ ಹಕ್ಕು ಆಯೋಗದ ಕಾರ್ಯವೈಖರಿ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೬ (೯೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ; ಆಯೋಗದಲ್ಲಿ ಎಷ್ಟು ಜನ ಕಾರ್ಯನಿರ್ವಹಿಸುತ್ತಿದ್ದಾರೆ ; (ಮಾಹಿತಿ ನೀಡುವುದು)

(ಆ) ಆಯೋಗದ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಸರ್ಕಾರ ಯಾವ ರೀತಿಯ ಸ್ಥಾನಮಾನಗಳನ್ನು ನೀಡಿದೆ ; ಹಾಗೂ ಇವರ ಹುದ್ದೆ ಅಲ್ಪಾವಧಿಯೇ ಅಥವಾ ಪೂರ್ಣ ಅವಧಿಯೇ ; ಇವರಿಗೆ ನೀಡುವ ವೇತನ ಹಾಗೂ ಇತರ ಭತ್ಯೆಗಳ ವಿವರ ನೀಡುವುದು ;

(ಇ) ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಇದುವರೆಗೂ ಯಾವ ಯಾವ ಜಿಲ್ಲೆಗಳಲ್ಲಿ ಮಕ್ಕಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡುತ್ತಿದೆಯೆಂದು ಸರ್ಕಾರಕ್ಕೆ ಮಾಹಿತಿಯಿದೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ;

(ಈ) ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ಪ್ರತಿ ವರ್ಷ ಮೀಸಲಿಡುತ್ತಿರುವ ಹಾಗೂ ಖರ್ಚು ಮಾಡುತ್ತಿರುವ ಬಗ್ಗೆ ವಿವರ ನೀಡುವುದು ;

(ಉ) ಆಯೋಗದ ಕಾರ್ಯವೈಖರಿಯಿಂದ ಎಷ್ಟು ಜನ ಮಕ್ಕಳ ಭವಿಷ್ಯ ಉಜ್ವಲವಾಗಿದೆ ? (ವಿವರ ನೀಡುವುದು)

## ಪರಿಷ್ಕೃತ ಯುಜಿಸಿ ಬಾಕಿ ವೇತನ ಬಿಡುಗಡೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೪೭ (೭೮೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪ್ರಥಮದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಮತ್ತು ಬಿ.ಇಡಿ., ಕಾಲೇಜುಗಳಲ್ಲಿ ದಿನಾಂಕ : ೦೧.೦೧.೨೦೦೬ ರಿಂದ ಜಾರಿಯಾಗಿರುವ ಪರಿಷ್ಕೃತ ಯುಜಿಸಿ ವೇತನ ಪಡೆಯುತ್ತಿರುವ ಅಧ್ಯಾಪಕರ ಸಂಖ್ಯೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಆ) ಸದರಿ ಅಧ್ಯಾಪಕರಿಗೆ ಪರಿಷ್ಕೃತ ಯುಜಿಸಿ ವೇತನ ಸಂಬಂಧ ಬಾಕಿ ನೀಡಬೇಕಾಗಿದೆಯೇ ;

(ಇ) ಹಾಗಾದರೆ, ಯಾವ ಸಮಯದಿಂದ, ಎಷ್ಟು ತಿಂಗಳ ಬಾಕಿ ಮೊತ್ತ ನೀಡಬೇಕಾಗಿದೆ ;

(ಈ) ಸದರಿ ಅಧ್ಯಾಪಕರಿಗೆ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು ; (ಪ್ರಥಮದರ್ಜೆ ಕಾಲೇಜು, ಇಂಜಿನಿಯರಿಂಗ್ ಹಾಗೂ ಬಿ.ಇಡಿ., ವರ್ಗವಾರು ವಿವರ ನೀಡುವುದು)

(ಉ) ಬಾಕಿ ಮೊತ್ತ ಬಿಡುಗಡೆ ಮಾಡಲು ವಿಳಂಬ ಉಂಟಾಗುತ್ತಿರಲು ಕಾರಣಗಳೇನು ; (ಪೂರ್ಣ ವಿವರ ನೀಡುವುದು)

(ಊ) ಸದರಿ ಬಾಕಿ ಮೊತ್ತ ಬಿಡುಗಡೆಗೊಳಿಸುವ ಸಲುವಾಗಿ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಋ) ಯಾವ ಕಾಲಮಿತಿಯಲ್ಲಿ ಪೂರ್ಣವಾಗಿ ಬಾಕಿ ಮೊತ್ತವನ್ನು ಸರ್ಕಾರ ಬಿಡುಗಡೆಗೊಳಿಸುತ್ತದೆ ?

## ಗೋಕಾಕ ಫಾಲ್ಸನ್ನು ಪ್ರವಾಸಿ ಸ್ಥಾನವನ್ನಾಗಿ ಅಭಿವೃದ್ಧಿಪಡಿಸುವುದು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮ (೭೧೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಗೋಕಾಕ ತಾಲ್ಲೂಕಿನ ಗೋಕಾಕ ಫಾಲ್ಸ್ ಪ್ರವಾಸಿ ಸ್ಥಾನವಾಗಿ ಅಭಿವೃದ್ಧಿಪಡಿಸುವ ವಿಷಯ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಪ್ರವಾಸಿಗರಿಗಾಗಿ ಕೈಗೊಂಡ ಮೂಲಭೂತ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಈಗಾಗಲೇ ಸೌಲಭ್ಯಗಳನ್ನು ಕೈಗೊಳ್ಳಲು ಮಾಡಿದ ವೆಚ್ಚ ಎಷ್ಟು ? (ವಿವರ ನೀಡುವುದು)

## ಗ್ರಾಮೀಣ ರಸ್ತೆಗಳ ಅಭಿವೃದ್ಧಿ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯ (೭೨೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯ ೩ ತಾಲ್ಲೂಕುಗಳಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಯಾದ ಹಣವೆಷ್ಟು ; ಯಾವ ಯಾವ ಕಾಮಗಾರಿಗೆ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ೨೦೧೪–೧೫ನೇ ಸಾಲಿಗೆ ಮಂಜೂರಾಗಿರುವ ಯೋಜನೆಗಳು ಯಾವುವು ? (ಗ್ರಾಮವಾರು ವಿವರ ನೀಡುವುದು)

## ನಿವೇಶನ ರಹಿತ ಫಲಾನುಭವಿಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೦ (೬೯೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ನಿವೇಶನ ರಹಿತ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಇದರಲ್ಲಿ ಎಷ್ಟು ಜನರಿಗೆ ನಿವೇಶನ ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಹಾಗಿದ್ದಲ್ಲಿ, ಉಳಿದ ಫಲಾನುಭವಿಗಳಿಗೆ ಯಾವಾಗ ನಿವೇಶನ ಮಂಜೂರು ಮಾಡಲಾಗುವುದು ;

(ಈ) ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 292, ಪ್ರತಿಗಳು– 1000 – ಪಿ8